# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1201** |
| ಉತ್ತರಿಸಬೇಕಾದ ದಿನಾಂಕ | : | 30.09.2020 |
| ಉತ್ತರಿಸಬೇಕಾದ ಸಚಿವರು | : | ವಸತಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಳೆದ 5 ವರ್ಷಗಳಲ್ಲಿ ಗದಗ, ಧಾರವಾಡ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ರಾಜೀವ ಗಾಂಧಿ ವಸತಿ ನಿಗಮ ನಿಯಮಿತದ ವತಿಯಿಂದ ಎಷ್ಟು ಫಲಾನುಭವಿಗಳಿಗೆ ಮನೆಗಳನ್ನು ನೀಡಲಾಗಿದೆ. | ಕಳೆದ 5 ವರ್ಷಗಳಲ್ಲಿ ಗದಗ, ಧಾರವಾಡ ಹಾಗೂ ಹಾವೇರಿ ಜಿಲ್ಲೆಯಲ್ಲಿ ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತದ ವತಿಯಿಂದ ಒಟ್ಟು 1,40,281 ಫಲಾನುಭವಿಗಳಿಗೆ ಮನೆಗಳನ್ನು ಮಂಜೂರು ಮಾಡಿ ಕಾಮಗಾರಿ ಆದೇಶ ನೀಡಲಾಗಿದೆ. ಜಿಲ್ಲಾವಾರು ವಿವರ ಈ ಕೆಳಕಂಡಂತಿದೆ. |

| ಕ್ರ. ಸಂ. | ಜಿಲ್ಲೆ | ಮಂಜೂರಾದ ಮನೆಗಳು | | | | | |
|---|---|---|---|---|---|---|---|
| | | 2015-16 | 2016-17 | 2017-18 | 2018-19 | 2019-20 | **ಒಟ್ಟು** |
| 1 | ಗದಗ | 11424 | 14852 | 15178 | 8 | 3136 | **44598** |
| 2 | ಧಾರವಾಡ | 8281 | 9827 | 12199 | 2 | 2163 | **32472** |
| 3 | ಹಾವೇರಿ | 17787 | 22630 | 20395 | 18 | 2381 | **63211** |
| **ಒಟ್ಟು** | | **37492** | **47309** | **47772** | **28** | **7680** | **140281** |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಆ) | ಕಳೆದ 5 ವರ್ಷಗಳಲ್ಲಿ ಗದಗ, ಧಾರವಾಡ ಹಾಗೂ ಹಾವೇರಿ ಜಿಲ್ಲೆಯಲ್ಲಿ ರಾಜೀವ ಗಾಂಧಿ ವಸತಿ ನಿಗಮ ನಿಯಮಿತದ ವತಿಯಿಂದ ಮನೆಗಳನ್ನು ನಿರ್ಮಿಸಲು ಫಲಾನುಭವಿಗಳಿಗೆ ನೀಡಲಾದ ಒಟ್ಟು ಮೊತ್ತವೆಷ್ಟು ; | ಕಳೆದ 5 ವರ್ಷಗಳಲ್ಲಿ ಗದಗ, ಧಾರವಾಡ ಹಾಗೂ ಹಾವೇರಿ ಜಿಲ್ಲೆಯಲ್ಲಿ ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತದ ವತಿಯಿಂದ ಫಲಾನುಭವಿಗಳಿಗೆ ಒಟ್ಟು ರೂ.169812.58 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದ್ದು, ಜಿಲ್ಲಾವಾರು ವಿವರ ಕೆಳಕಂಡಂತಿದೆ. ವರ್ಷವಾರು ವಿವರಗಳನ್ನು ಅನುಬಂಧ 1 ರಲ್ಲಿ ಒದಗಿಸಲಾಗಿದೆ. |

(ರೂ.ಲಕ್ಷಗಳಲ್ಲಿ)

| **ಕ್ರ. ಸಂ.** | **ಜಿಲ್ಲೆಯ ಹೆಸರು** | **ಬಿಡುಗಡೆಗೊಳಿಸಿರುವ ಮೊತ್ತ** |
|---|---|---|
| 01 | ಗದಗ | 54520.88 |
| 02 | ಧಾರವಾಡ | 46225.27 |
| 03 | ಹಾವೇರಿ | 69066.43 |
| **ಒಟ್ಟು** | | 169812.58 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಇ) | ಕಳೆದ 3 ವರ್ಷಗಳಲ್ಲಿ ಗದಗ, ಧಾರವಾಡ ಹಾಗೂ ಹಾವೇರಿ ಜಿಲ್ಲೆಯಲ್ಲಿ ರಾಜೀವ ಗಾಂಧಿ ವಸತಿ ನಿಗಮ ನಿಯಮಿತದ ವತಿಯಿಂದ ಮನೆಗಳನ್ನು ನಿರ್ಮಿಸಲು ನೀಡಬೇಕಾದ ಸಹಾಯಧನ ಬಾಕಿ | ವಸತಿ ಯೋಜನೆಗಳಡಿ ಫಲಾನುಭವಿಗಳು ನಿರ್ಮಿಸಿ ಕೊಂಡಿರುವ ಮನೆಗಳನ್ನು "ಇಂದಿರಾಮನೆ" ಆ್ಯಪ್ ಮೂಲಕ ಜಿ.ಪಿ.ಎಸ್ ಆಧಾರಿತ ಸ್ಥಳೀಯ ಅಧಿಕಾರಿಗಳ ದೃಢೀಕರಣದ ಆಧಾರದ ಮೇಲೆ ಫಲಾನುಭವಿಗಳ ಖಾತೆಗೆ ಅನುದಾನವನ್ನು ನೇರವಾಗಿ ಬಿಡುಗಡೆಗೊಳಿಸಲಾಗುತ್ತಿತ್ತು.<br><br>ನಂತರ ಸರ್ಕಾರದ ಆದೇಶ ಸಂಖ್ಯೆ:ವಇ 154 ಹೆಚ್ಎಎಂ 2019, ದಿನಾಂಕ:06.112019 ರನ್ವಯ ವಿವಿಧ ವಸತಿ ಯೋಜನೆಗಳಡಿ ಪ್ರಗತಿಯಲ್ಲಿರುವ ಮನೆಗಳನ್ನು ಇಂದಿರಾ ಮನೆ ಮೊಬೈಲ್ ಆಪ್ ಮೂಲಕ ಮನೆಗಳ ಪ್ರಗತಿಯನ್ನು ಜಿ.ಪಿ.ಎಸ್ ಗೆ ಅಳವಡಿಸಿ |

| | | |
|---|---|---|
| | ಉಳಿಯಲು ಕಾರಣಗಳೇನು ; | ಅರ್ಹಗೊಂಡ ನಂತರ ಸದರಿ ಮನೆಗಳ ಪ್ರಗತಿಯನ್ನು ಮತ್ತೊಮ್ಮೆ Geo ಆಧಾರಿತ Vigil App ಮೂಲಕ ಗ್ರಾಮೀಣ ಪ್ರದೇಶದಲ್ಲಿ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಯವರು ಹಾಗೂ ನಗರ ಪ್ರದೇಶದಲ್ಲಿ ಜಿಲ್ಲಾಧಿಕಾರಿಯವರು ಪರಿಶೀಲಿಸಿ, ಅನುಮೋದಿಸಿದ ಅರ್ಹಗೊಂಡ ಮನೆಗಳಿಗೆ ಆಧಾರ್ ಜೋಡಣೆಯಾದ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ಅನುದಾನ ಬಿಡುಗಡೆ ಮಾಡಲು ಕ್ರಮ ವಹಿಸಲಾಗುತ್ತಿದೆ. |
| (ಈ) | ಬಾಕಿ ಮೊತ್ತವನ್ನು ಯಾವಾಗ ಬಿಡುಗಡೆಗೊಳಿಸಲಾಗುವುದು ? | ಈವರಗೆ ಒಟ್ಟಾರೆಯಾಗಿ ರೂ.893.07 ಕೋಟಿಗಳ ಅನುದಾನವನ್ನು ನೇರವಾಗಿ ಫಲಾನುಭವಿಗಳ ಖಾತೆಗಳಿಗೆ ಬಿಡುಗಡೆ ಮಾಡಲಾಗಿದೆ. "ವಿಜಿಲ್ ಆ್ಯಪ್" ಮೂಲಕ ಪರಿಶೀಲಿಸುವ ಕಾರ್ಯ ಪ್ರಗತಿಯಲ್ಲಿದ್ದು, ಅರ್ಹಗೊಂಡ ಮನೆಗಳಿಗೆ ಜಿಲ್ಲಾಧಿಕಾರಿಗಳು ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಪರಿಶೀಲಿಸಿ, ಅನುಮೋದಿಸಿದ ಕೂಡಲೇ ತ್ವರಿತವಾಗಿ ಅನುದಾನ ಬಿಡುಗಡೆಗೆ ಕ್ರಮ ವಹಿಸಲಾಗುವುದು. |

ಸಂಖ್ಯೆ :ವಇ 336 ಹೆಚ್ಎಎಂ 2020

**(ವಿ. ಸೋಮಣ್ಣ)**
ವಸತಿ ಸಚಿವರು.